*ಓ.ಎಸ್.ನಂ.152/2018*
**ಪಿ ಡಬ್ಲ್ಯೂ-1**

***<u>ದಿಃ 13-12-2021 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.</u>***

***<u>ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಬಿ ಪಿ ಆರ್ ವಕೀಲರಿಂದ.</u>***

ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಸಂಗತಿಗಳು ನನ್ನ ಸ್ವಂತ ಮಾಹಿತಿ ಮೇರೆಗೆ ಹೇಳಿ ಬರೆಸಿದ್ದು ಅವು ಸತ್ಯವಾಗಿರುತ್ತವೆ. ಪ್ರಮಾಣಪತ್ರದಲ್ಲಿನ ಸಂಗತಿಗಳನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ನ್ಯಾಯಾಲಯಕ್ಕೆ ದಿನಾಂಕಃ *03-03-2021* ರ ವಿಶೇಷ ಮುಕ್ತಿಯಾರ್ ನಾಮೆ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-*1* ಎಂದು ಗುರುತಿಸಲಾಯಿತು. ಎರಡು ಪಹಣಿ ಪತ್ರಿಕೆಗಳು ಮತ್ತು ಒಂದು ಎಂ ಆರ್ ನ ಗಣಕೀಕೃತ ಪ್ರತಿಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-*2* ರಿಂದ ನಿಪಿ-*4* ಎಂದು ಗುರುತಿಸಲಾಯಿತು. ಕೈಬರಹದ ಎರಡು ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-*5* ಮತ್ತು ನಿಪಿ-*6* ಎಂದು ಗುರುತಿಸಲಾಯಿತು. ಒಂದು ಕಂದಾಯ ರಸೀದಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-*7* ಎಂದು ಗುರುತಿಸಲಾಯಿತು. ಕರಡು ನಕ್ಷೆಯ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-*8* ಎಂದು ಗುರುತಿಸಲಾಯಿತು. ಹಿಡುವಳಿ ಸರ್ಟಿಫಿಕೇಟ್ ನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-*9* ಎಂದು ಗುರುತಿಸಲಾಯಿತು. ಪಟ್ಟಾ ಮತ್ತು ರಸೀದಿಯ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-*10* ಎಂದು ಗುರುತಿಸಲಾಯಿತು. ಋಣಭಾರ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-*11* ಎಂದು ಗುರುತಿಸಲಾಯಿತು. ರೆಕಾರ್ಡ ಆಫ್ ರೈಟ್ಸ್ ಮತ್ತು ಇಂಡೆಕ್ಸ್ ಆಫ್ ಲ್ಯಾಂಡ್ಸ್ ನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-*12* ಮತ್ತು ನಿಪಿ-*13* ಎಂದು ಗುರುತಿಸಲಾಯಿತು.

ನಕ್ಷೆಯ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-*14* ಎಂದು ಗುರುತಿಸಲಾಯಿತು. ಆಕಾರ್ ಬಂದ್ ನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-*15* ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಮುಂದುವರಿದ ಮುಖ್ಯವಿಚಾರಣೆಗಾಗಿ ಸಮಯಾವಕಾಶ ಕೋರಿದ್ದು, ಸಮಯಾವಕಾಶ ನೀಡಿ ಮುಂದೂಡಲಾಯ್ತು**

*(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)*

*ಓ. ಕೇ. ಸ. ಇ. ಎ. ಒ.*

Sd/-

*ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು*

***ಪ್ರ.ದ.ನ್ಯಾ.ದಂ. ರವರು, ತರೀಕೆರೆ.***